# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 65 |
| ಉತ್ತರಿಸಬೇಕಾದ ದಿನಾಂಕ | : | 13-02-2024 |
| ಉತ್ತರಿಸಬೇಕಾದ ಸಚಿವರು | : | ಸಹಕಾರ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2023-24ನೇ ಸಾಲಿನಲ್ಲಿ ಕೋಚಿಮುಲ್‌ನಲ್ಲಿ ಎಷ್ಟು ಹುದ್ದೆಗಳ ನೇಮಕಾತಿಗಾಗಿ ಅರ್ಜಿಯನ್ನು ಆಹ್ವಾನಿಸಲಾಗಿತ್ತು: ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು: (ಅಭ್ಯರ್ಥಿಗಳ ನೇಮಕಾತಿ ಪ್ರಕ್ರಿಯೆಯ ಸಂಪೂರ್ಣ ವಿವರ ನೀಡುವುದು) | ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಹಾಲು ಒಕ್ಕೂಟದಲ್ಲಿ ಖಾಲಿ ಇರುವ ವಿವಿಧ ವೃಂದದ 273 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು 04 ನೇಮಕಾತಿ ಪ್ರಕಟಣೆಗಳನ್ನು ಹೊರಡಿಸಲಾಗಿರುತ್ತದೆ. 04 ನೇಮಕಾತಿ ಪ್ರಕಟಣೆಗಳಿಗೆ 10,170 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿರುತ್ತಾರೆ.<br><br>ಈ ಪೈಕಿ ನೇಮಕಾತಿ ಪ್ರಕಟಣೆ 03&04 ರಲ್ಲಿನ 192 ಹುದ್ದೆಗಳಿಗೆ ಕರ್ನಾಟಕ ಉಚ್ಛ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:22429/2023,ದಿನಾಂಕ:09-10-2023 ರಲ್ಲಿ ತಡೆಯಾಜ್ಞೆ ನೀಡಿರುತ್ತದೆ. ಉಳಿದ 81 ಹುದ್ದೆಗಳ ಪೈಕಿ 75 ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದೆ. |
| ಆ) | ಅಭ್ಯರ್ಥಿಗಳ ಆಯ್ಕೆಗೆ ಇದ್ದ ಮಾನದಂಡಗಳೇನು: ಆಯ್ಕೆ ಪಟ್ಟಿ ತಯಾರಿಸಲು ಅನುಸರಿಸಿದ ಪ್ರಕ್ರಿಯೆ ಏನು: | ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1960 ರ ನಿಯಮ 17&18 ರಲ್ಲಿರುವಂತೆ ಅಭ್ಯರ್ಥಿಗಳ ಆಯ್ಕೆಗೆ ಮಾನದಂಡಗಳನ್ನು ಅನುಸರಿಸಲಾಗಿರುತ್ತದೆ. ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1960 ರ ನಿಯಮ 18 (ಸಿ) ರಂತೆ ಲಿಖಿತ ಪರೀಕ್ಷೆಯನ್ನು ಒಟ್ಟು 200 ಅಂಕಗಳಿಗೆ ನಡೆಸಿ, ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇ.85 ಕ್ಕೆ ಇಳಿಸಿ, 1 : 5 ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಆಹ್ವಾನಿಸಲಾಗಿರುತ್ತದೆ. ಲಿಖಿತ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳನ್ನು ಶೇ.85 ಕ್ಕೆ ಇಳಿಸಿರುವ ಅಂಕಗಳು ಮತ್ತು ಸಂದರ್ಶನದಲ್ಲಿ ನೇಮಕಾತಿ ಸಮಿತಿ ಸದಸ್ಯರು ನೀಡಿರುವ 15 ಅಂಕಗಳನ್ನು ಒಟ್ಟುಗೂಡಿಸಿ ಅಭ್ಯರ್ಥಿಗಳನ್ನು ಮೀಸಲಾತಿಗನುಗುಣವಾಗಿ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗಿದೆ. |

| | | |
|---|---|---|
| ಇ) | ಆಯ್ಕೆ ಪಟ್ಟಿ ಪ್ರಕಟ ಮಾಡುವ ಮುನ್ನವೇ ಮಾಹಿತಿ ಹೊರಹಾಕಿದ್ದ ಸಿಬ್ಬಂದಿ ವಿರುದ್ಧ ಪ್ರಕರಣ ದಾಖಲಿಸಲಾಗಿದೆಯೇ: ಸದರಿ ಪಟ್ಟಿಯಲ್ಲಿ ಹುದ್ದೆಗೆ ಶಿಫಾರಸ್ಸು ಮಾಡಿದ ಜನಪ್ರತಿನಿಧಿಗಳ ಹೆಸರು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಆಯ್ಕೆ ಪಟ್ಟಿ ಪ್ರಕಟ ಮಾಡುವ ಮುನ್ನವೇ ಮಾಹಿತಿ ಹೊರ ಹಾಕಿದ್ದ ಬಗ್ಗೆ ಕೋಲಾರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂಖ್ಯೆ:0628/2023 ನ್ನು ದಾಖಲಿಸಲಾಗಿರುತ್ತದೆ.<br>ಸದರಿ ಪಟ್ಟಿಯಲ್ಲಿ ಹುದ್ದೆಗೆ ಶಿಫಾರಸ್ಸು ಮಾಡಿದ ಜನಪ್ರತಿನಿಧಿಗಳ ಹೆಸರು ಇರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಈ) | ಸದರಿ ನೇಮಕಾತಿಯಲ್ಲಿ ಅಕ್ರಮ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |

**ಸಂಖ್ಯೆ: ಸಿಒ 20 ಸಿಸಿಬಿ 2024**

K. N. Rajanna

**(ಕೆ.ಎನ್.ರಾಜಣ್ಣ)**
**ಸಹಕಾರ ಸಚಿವರು**